**AUGUST 24, 2025**

**ALL INDIA RADIO- DHARWAD**

**PRADESH SAMACHARA (KANNADA) 7:05 AM**

**<u>ಮುಖ್ಯಾಂಶಗಳು</u>**

- **ಧಾರವಾಡ ಜಿಲ್ಲೆಯಲ್ಲಿ ಮಳೆಯಿಂದ ಹಾನಿಗೊಳಗಾದ ಪ್ರದೇಶಗಳಿಗೆ ಜಿಲ್ಲಾ ಉಸ್ತುವಾರಿ ಸಚಿವರ ಭೇಟಿ: ಹಾನಿ ಕುರಿತು ಪ್ರಾಥಮಿಕ ಸಮೀಕ್ಷಾ ವರದಿ ಸಲ್ಲಿಕೆ.**
- **ಅಭಿವೃದ್ಧಿ ಯೋಜನೆಗಳ ಅನು ್ಠಾನದಲ್ಲಿ ನಿರ್ಲಕ್ಷ್ಯ ತೋರುವ ಎಪಿಎಂಸಿ ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ಕೃಷಿ ಮಾರುಕಟ್ಟೆ ಸಚಿವರ ಸೂಚನೆ.**
- **ಪರಿಸರ ಸ್ನೇಹಿ ಗಣೇಶೋತ್ಸವ ಆಚರಣೆಗೆ ಅರಣ್ಯ ಮತ್ತು ಪರಿಸರ ಇಲಾಖೆ ಸಚಿವರ ಮನವಿ.**
- **ಮುಂಬರುವ ಗಣೇಶ ಮತ್ತು ಈದ್ ಮಿಲಾದ ಆಚರಣೆ ಸಂದರ್ಭದಲ್ಲಿ ಶಾಂತಿ, ಸುವ್ಯವಸ್ಥೆ ಕಾಪಾಡಲು ಜಿಲ್ಲಾಡಳಿತಗಳಿಂದ ಅಗತ್ಯ ಕ್ರಮ.**

***********

**ಧಾರವಾಡ ಜಿಲ್ಲೆಯಲ್ಲಿ ಸುರಿದ ಭಾರಿ ಮಳೆಯಿಂದ ಜಿಲ್ಲೆಯಲ್ಲಿ ಹೆಚ್ಚಿನ ಬೆಳೆ ಮತ್ತು ಸಾರ್ವಜನಿಕ ಆಸ್ತಿಗೆ ಹಾನಿ ಸಂಭವಿಸಿದ್ದು, ಹಾನಿಗೊಳಗಾದ ಪ್ರದೇಶಗಳಿಗೆ ಜಿಲ್ಲಾ ಉಸ್ತುವಾರಿ ಸಚಿವ ಸಂತೋ ್ ಲಾಡ್ ಭೇಟಿ ನೀಡಿ, ಪರಿಶೀಲನೆ ನಡೆಸಿದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಜಿಲ್ಲೆಯಲ್ಲಿ ನಿರಂತರವಾಗಿ ಸುರಿದ ಭಾರಿ ಮಳೆಯಿಂದಾಗಿ ಒಟ್ಟು 97,612 ಹೆಕ್ಟೆರ್ ಪ್ರದೇಶದಲ್ಲಿ ಬೆಳೆ ಹಾನಿಯಾಗಿರುವ ಕುರಿತು ಜಿಲ್ಲಾಡಳಿತಕ್ಕೆ ಪ್ರಾಥಮಿಕ ಸಮೀಕ್ಷಾ ವರದಿ ಸಲ್ಲಿಸಲಾಗಿದೆ ಎಂದರು. ನವಲಗುಂದ, ಧಾರವಾಡ, ಅಣ್ಣಿಗೇರಿ, ಹುಬ್ಬಳ್ಳಿ, ಕುಂದಗೋಳ, ಕಲಘಟಗಿ ತಾಲೂಕುಗಳ ವ್ಯಾಪ್ತಿಯಲ್ಲಿ ಹೆಸರು, ಉದ್ದು, ಮೆಕ್ಕೆಜೋಳ, ಮೆಣಸಿನಕಾಯಿ ಹಾಗೂ ಈರುಳ್ಳಿ ಬೆಳೆಗಳಿಗೆ ಹಾನಿಯಾಗಿದ್ದು, ಶೀಘ್ರದಲ್ಲಿ ಸರ್ಕಾರಕ್ಕೆ ಈ ವರದಿ ಸಲ್ಲಿಸಿ, ಪರಿಹಾರ ಬಿಡುಗಡೆಗೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ಹೇಳಿದರು. ರೈತರ ಮನವಿಗೆ ಪ್ರತಿಕ್ರಿಯಿಸಿದ ಸಚಿವರು, ಹಾನಿ ಕುರಿತು ಸರ್ಕಾರದ ಗಮನಕ್ಕೆ ತಂದು, ನ ್ಟ ಪರಿಹಾರ ಮತ್ತು ಬೆಳೆ ವಿಮೆ ದೊರಕಿಸಲು ಕ್ರಮ ಕೈಗೊಳ್ಳುವುದಾಗಿ ಸಚಿವರು ಭರವಸೆ ನೀಡಿದರು.**

***********

**ಅಭಿವೃದ್ಧಿ ಯೋಜನೆಗಳ ಅನು ್ಠಾನದಲ್ಲಿ ನಿರ್ಲಕ್ಷ್ಯ ತೋರುವ ಹಾಗೂ ವಿಳಂಬ ನೀತಿ ಅನುಸರಿಸುತ್ತಿರುವ ಎಪಿಎಂಸಿ ಅಧಿಕಾರಿಗಳನ್ನು ಅಮಾನತು ಮಾಡುವಂತೆ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್ ಹಿರಿಯ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಬೆಂಗಳೂರಿನಲ್ಲಿ ನಾಲ್ಕು ಕಂದಾಯ ವಿಭಾಗಗಳ ಎಪಿಎಂಸಿ ಅಧಿಕಾರಿಗಳ ಸಭೆ ನಡೆಸಿದ ಅವರು, ಪ್ರತಿಯೊಂದು ಎಪಿಎಂಸಿಯ ಸ್ಥಿತಿ, ಅನುಮೋದಿತ ಯೋಜನೆಗಳು, ಟೆಂಡರ್‌ಗಳು ಹಾಗೂ ವಿಳಂಬದ ಕಾರಣಗಳ ಬಗ್ಗೆ ಅಧಿಕಾರಿಗಳು ವಿವರವಾದ ವರದಿ ಸಲ್ಲಿಸಬೇಕು ಎಂದು ನಿರ್ದೇಶನ ನೀಡಿದರು. ಮೂಲಸೌಕರ್ಯ ಕೋಲ್ಡ್‌ಸ್ಟೋರೇಜ್ ಯೋಜನೆಗಳ ಪ್ರಗತಿ ಪರಿಶೀಲಿಸಿದ ಸಚಿವರು, "ಗೋಡೌನ್‌ಗಳು ಬಹುತೇಕ ಖಾಲಿಯಾಗಿವೆ, ಅನಾವಶ್ಯಕ ಕಾಮಗಾರಿಗಳ ಬದಲು ಅಗತ್ಯ ಯೋಜನೆಗಳನ್ನು ಕೈಗೊಳ್ಳಬೇಕು. ಮಳೆಗಾಲ ನೆಪವಿಟ್ಟು ರಸ್ತೆ ನಿರ್ಮಾಣ ವಿಳಂಬ ಮಾಡಬಾರದು" ಎಂದು ಸಚಿವರು ಸೂಚನೆ ನೀಡಿದರು.**

***********

ಬರುವ ಗಣೇಶೋತ್ಸವದ ಸಂದರ್ಭದಲ್ಲಿ ಪರಿಸರಕ್ಕೆ ಮಾರಕವಾದ ಪಟಾಕಿ ಬಳಸದೆ, ಹಸಿರು ಪಟಾಕಿ ಸಿಡಿಸಬೇಕು ಎಂದು ಅರಣ್ಯ ಮತ್ತು ಪರಿಸರ ಇಲಾಖೆ ಸಚಿವ ಈಶ್ವರ್ ಖಂಡ್ರೆ ಮನವಿ ಮಾಡಿದ್ದಾರೆ. ಪಿ.ಒ.ಪಿ. ಗಣೇಶ ಮೂರ್ತಿಗಳಲ್ಲಿರುವ ವಿ ಕಾರಿ ಅಂಶಗಳು ನೀರಿನಲ್ಲಿ ಸೇರಿ ಜಲಚರಗಳ ಸಾವಿಗೆ ಕಾರಣವಾಗುತ್ತವೆ. ಹೀಗಾಗಿ, ಗಣೇಶೋತ್ಸವ ಸಮಿತಿಗಳು ಮತ್ತು ಸಾರ್ವಜನಿಕರು ಪಿ.ಒ.ಪಿ. ಗಣಪತಿ ಮೂರ್ತಿಗಳನ್ನು ಖರೀದಿಸದೆ, ಪರಿಸರ ಸ್ನೇಹಿಯಾದ ಮಣ್ಣಿನ ಗಣಪತಿ ಮೂರ್ತಿಗಳನ್ನು ಪೂಜಿಸಬೇಕು ಎಂದು ತಿಳಿಸಿದ್ದಾರೆ. ಪಿಒಪಿ ಗಣೇಶ ಮೂರ್ತಿಗಳನ್ನು ಬಳಸುವುದಿಲ್ಲ ಎಂದು ಸಾರ್ವಜನಿಕ ಗಣೇಶೋತ್ಸವ ಸಮಿತಿಗಳಿಂದ ಮುಚ್ಚಳಿಕೆ ಬರೆಸಿಕೊಂಡು, ಪೆಂಡಾಲ್‌ಗೆ ಅನುಮತಿ ನೀಡುವಂತೆ ಸ್ಥಳೀಯ ಆಡಳಿತ ಸಂಸ್ಥೆಗಳಿಗೆ ಸೂಚಿಸಲಾಗಿದೆ ಎಂದು ಸಚಿವರು ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ತಿಳಿಸಿದ್ದಾರೆ.

*******

ಮುಂಬರುವ ಗಣೇಶೋತ್ಸವ ಮತ್ತು ಈದ್ ಮಿಲಾದ ಆಚರಣೆ ವೇಳೆ ಶಾಂತಿ, ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಜಿಲ್ಲಾಡಳಿತಗಳು ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡಿವೆ. ಕಾರವಾರ ಜಿಲ್ಲೆಯಲ್ಲಿ ಇದೇ 27 ರಂದು ಆಚರಿಸುವ ಗಣೇಶ ಚತುರ್ಥಿ ಹಬ್ಬ ಮತ್ತು ಸೆಪ್ಟಂಬರ್ 5 ರ ಈದ್ ಮಿಲಾದ್ ಹಬ್ಬದ ಮೆರವಣಿಗೆ ಸಂದರ್ಭದಲ್ಲಿ ಮುನ್ನೆಚ್ಚರಿಕೆ ಕ್ರಮವಾಗಿ ಮದ್ಯದಂಗಡಿಗಳನ್ನು ಮುಚ್ಚಲು ಕ್ರಮ ಕೈಗೊಳ್ಳಲಾಗುವುದು, ಸಾರ್ವಜನಿಕರು ಯಾವುದೇ ಸಮಸ್ಯೆಗಳಿದ್ದಲ್ಲಿ ಜಿಲ್ಲಾಧಿಕಾರಿ ಕಚೇರಿ ಕಂಟ್ರೋಲ್ ರೂಂ 9483511015 ಮತ್ತು ಪೊಲೀಸ್ ಸಹಾಯವಾಣಿ 112 ನ್ನು ಸಂಪರ್ಕಿಸಬಹುದು ಎಂದು ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯಾ ತಿಳಿಸಿದ್ದಾರೆ. ಹಿಂದೂ ಮತ್ತು ಮುಸ್ಲಿಂ ಸಮುದಾಯದವರು ಶಾಂತಿಯಿಂದ ಹಬ್ಬ ಆಚರಿಸಬೇಕು. ಸಮಾಜದ ಸ್ವಾಸ್ಥ್ಯ ಕಾಪಾಡುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ಕೈಗೊಳ್ಳುವ ಕ್ರಮಗಳಿಗೆ ಎಲ್ಲರೂ ಸಹಕಾರ ನೀಡಬೇಕು ಎಂದು ಕೆಜಿಎಫ್ ಜಿಲ್ಲಾ ಪೊಲೀಸ್ ವರಿ ್ಠಾಧಿಕಾರಿ ಶಿವಾಂಶು ರಜಪೂತ್ ತಿಳಿಸಿದರು. ಗಣೇಶೋತ್ಸವ ಮತ್ತು ಈದ್ ಮಿಲಾದ್ ವೇಳೆ, ಮಹಾನಗರ ಪಾಲಿಕೆ ಅನುಮತಿ ಇಲ್ಲದೇ ಸಾರ್ವಜನಿಕ ಸ್ಥಳದಲ್ಲಿ ಯಾವುದೇ ಬಂಟಿಂಗ್ಸ್, ಬ್ಯಾನರ್‌ಗಳನ್ನು ಕಟ್ಟುವಂತಿಲ್ಲ ಎಂದು ದಾವಣಗೆರೆ ಜಿಲ್ಲಾಧಿಕಾರಿ ಡಾ.ಗಂಗಾಧರ ಸ್ವಾಮಿ ನಿರ್ದೇಶನ ನೀಡಿದ್ದಾರೆ. ಗಣೇಶ ಹಬ್ಬ ಹಾಗೂ ಈದ್ ಮಿಲಾದ್ ಹಬ್ಬವನ್ನು ಹಿಂದೂ, ಮುಸ್ಲಿಂ ಸಮುದಾಯದವರು ಶಾಂತಿ, ಸೌಹಾರ್ದದಿಂದ ಆಚರಿಸಬೇಕು ಎಂದು ಯಾದಗಿರಿ ಜಿಲ್ಲಾ ಪೊಲೀಸ್ ವರಿ ್ಠಾಧಿಕಾರಿ ಪೃಥ್ವಿಕ್ ಶಂಕರ್ ಮನವಿ ಮಾಡಿದ್ದಾರೆ. ಹಾವೇರಿ ಜಿಲ್ಲೆಯಲ್ಲಿ ಗೌರಿ ಗಣೇಶ ಹಾಗೂ ಈದ್ ಮಿಲಾದ್ ಹಬ್ಬವನ್ನು ಶಾಂತಿಯುತವಾಗಿ ಹಾಗೂ ಪರಿಸರ ಸ್ನೇಹಿ ಹಬ್ಬವಾಗಿ ಆಚರಿಸೋಣ ಎಂದು ಜಿಲ್ಲಾಧಿಕಾರಿ ಡಾ. ವಿಜಯಮಹಾಂತೇಶ್ ದಾನಮ್ಮನವರ ಸಲಹೆ ನೀಡಿದ್ದಾರೆ.

*******

ಈಗ ಪ್ರಕಟಣೆ.. ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..

ಪ್ರಕಟಣೆ

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

*******

ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ಇಕೋ ಭಕ್ತಿ ಸಂಭ್ರಮ ಎಂಬ ವಿನೂತನ ಪರಿಕಲ್ಪನೆಯ ಮೂಲಕ ಪರಿಸರ ಸ್ನೇಹಿ ಗಣೇಶೋತ್ಸವ ಆಚರಣೆಗೆ ಮುಂದಾಗಿದೆ. ಪಿಒಪಿ ಮೂರ್ತಿಗಳಿಗೆ ಸಂಪೂರ್ಣ ಕಡಿವಾಣ ಹಾಕುವ ಪ್ರಯತ್ನ ನಮ್ಮದಾಗಿದೆ. ಕೆರೆ, ಬಾವಿ, ಪಿಒಪಿ ಗಣೇಶ ಮೂರ್ತಿಗಳನ್ನು, ಪ್ಲಾಸ್ಟಿಕ್, ಮರು ಬಳಕೆಯಾಗದ ತ್ಯಾಜ್ಯಗಳನ್ನು ವಿಸರ್ಜನೆ ಮಾಡದೆ, ಮನೆ ಆವರಣದಲ್ಲೇ ಬಕೆಟ್, ಕೃತಕ ಹೊಂಡಗಳಲ್ಲಿ ವಿಸರ್ಜಿಸಿ ಜಲ ಮೂಲಗಳನ್ನು ರಕ್ಷಿಸುವಂತೆ ಜನರಲ್ಲಿ ಅರಿವು ಮೂಡಿಸುವುದು ಅಭಿಯಾನದ ಉದ್ದೇಶ. ವಿನೂತನ ಉಪಕ್ರಮದ ಕುರಿತು ಪಾಲಿಕೆ ಆಯುಕ್ತ ರುದ್ರೇಶ ಘಾಳಿ ಅಧಿಕೃತ ಎಕ್ಸ್ ಮಾಧ್ಯಮದಲ್ಲಿ ಹೆಚ್ಚಿನ ಮಾಹಿತಿ ನೀಡಿದ್ದಾರೆ.

*******

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲೂಕಿನ ಬಾಶೆಟ್ಟಿಹಳ್ಳಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಭಾರತೀಯ ಸ್ಟೇಟ್ ಬ್ಯಾಂಕ್ ಕೈಗಾರಿಕಾ ಪ್ರದೇಶ ಶಾಖೆ ಹಾಗೂ ಕೇಂದ್ರ ಹಣಕಾಸು ಸೇವೆಗಳ ಇಲಾಖೆ ಸಹಯೋಗದಲ್ಲಿ ಹಣಕಾಸು ಸೇರ್ಪಡೆ ಪರಿಪೂರ್ಣತೆ ಜನಸುರಕ್ಷಣಾ ಅಭಿಯಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಬ್ಯಾಂಕ್‌ನ ಉಪ

ವ್ಯವಸ್ಥಾಪಕ ನಿರ್ದೇಶಕ ಬಿನೋದಕುಮಾರ್ ಮಿಶ್ರಾ ಮಾತನಾಡಿ, ಕೇಂದ್ರ ಸರ್ಕಾರದ ಸಾಮಾಜಿಕ ಭದ್ರತಾ ಯೋಜನೆಗಳ ಸದುಪಯೋಗವನ್ನು ಜನಸಾಮಾನ್ಯರು ಪಡೆದುಕೊಳ್ಳಬೇಕಿದೆ. ಅಂತೆಯೇ ಡಿಜಿಟಲ್ ವಂಚನೆಗಳಿಂದ ಪಾರಾಗುವ ಕುರಿತು ಅರಿವು ಮೂಡಿಸಿಕೊಳ್ಳಬೇಕಿದೆ. ಈ ದಿಸೆಯಲ್ಲಿ ರಾ ್ಟ್ರವ್ಯಾಪಿ ಹಣಕಾಸು ಸೇರ್ಪಡೆ ಉಪಕ್ರಮಕ್ಕೆ ಪೂರಕವಾಗಿ ಪ್ರಮುಖ ಹಣಕಾಸು ಸೇರ್ಪಡೆ ಪರಿಪೂರ್ಣತೆ ಅಭಿಯಾನ ರೂಪಿಸಲಾಗಿದೆ ಎಂದರು.

*******

ಕೇಂದ್ರ ಪುರಸ್ಕೃತ ಸಾಮಾಜಿಕ ಹಾಗೂ ಆರ್ಥಿಕ ಭದ್ರತಾ ಯೋಜನೆಗಳ ಕುರಿತು, ಬೆಳಗಾವಿ ಜಿಲ್ಲೆಯಾದ್ಯಂತ ಜನ ಜಾಗೃತಿ ಅಭಿಯಾನ, ಸಪ್ಟೆಂಬರ್ 30 ರ ವರೆಗೆ, ನಡೆಯಲಿದೆ. ಜಿಲ್ಲೆಯ ರಾಯಬಾಗ ಕೆನರಾ ಬ್ಯಾಂಕ್ ಶಾಖೆ ವತಿಯಿಂದ ಖಾತೆ ತೆರೆಯುವ ಅಭಿಯಾನ ಆಯೋಜಿಸಲಾಗಿತ್ತು. ಅಭಿಯಾನದಲ್ಲಿ ಬ್ಯಾಂಕ್‌ನ ಸಲಹೆಗಾರರು, ಪ್ರಧಾನಮಂತ್ರಿ ಜನ್-ಧನ್ ಯೋಜನೆ, ಪ್ರಧಾನಮಂತ್ರಿ ಜೀವನ ಜ್ಯೋತಿ ಬಿಮಾ ಯೋಜನೆ, ಪ್ರಧಾನಮಂತ್ರಿ ಸುರಕ್ಷಾ ಬಿಮಾ ಯೋಜನೆ ಮತ್ತು ಅಟಲ್ ಪಿಂಚಣಿ ಯೋಜನೆ ಮತ್ತು ಸೈಬರ್ ಸುರಕ್ಷತೆ ಕುರಿತು ಮಾಹಿತಿ ನೀಡಿದರು.

*******

ಗದಗ ಜಿಲ್ಲೆಯ ಬೆಳ್ಳಟ್ಟಿ ಗ್ರಾಮದ ಎಪಿಎಂಸಿ ಸಭಾ ಭವನದಲ್ಲಿ ನಾಳೆ ಲೋಕಾಯುಕ್ತ ಜನ ಸಂಪರ್ಕ ಸಭೆ ಹಾಗೂ ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಜರುಗಲಿದೆ. ಈ ವೇಳೆ ಸರ್ಕಾರಿ ಕಚೇರಿಗಳಲ್ಲಿ ಸಾರ್ವಜನಿಕರ ಕೆಲಸ ಕಾರ್ಯಗಳನ್ನು ಮಾಡಿಕೊಡಲು ಅಧಿಕಾರಿಗಳು ಉದ್ದೇಶ ಪೂರ್ವಕವಾಗಿ ವಿಳಂಬ ಮಾಡುತ್ತಿರುವ ಬಗ್ಗೆ ಲಿಖಿತ ದೂರು ನೀಡಬಹುದಾಗಿದೆ.ಸರ್ಕಾರದ ಯೋಜನೆಗಳ ಲಾಭವನ್ನು ಅರ್ಹರಿಗೆ ತಲುಪಿಸುವಲ್ಲಿ ತಾರತಮ್ಯ ಮಾಡುತ್ತಿರುವ ಬಗ್ಗೆ, ಅನಗತ್ಯ ವಿಳಂಬ, ಕಳಪೆ ಕಾಮಗಾರಿ ನಡೆಸಿ ಹಣ ದುರುಪಯೋಗ ಪಡಿಸಿದ ದೂರುಗಳು ಸೇರಿದಂತೆ ಇನ್ನಿತರೆ ಅಕ್ರಮಗಳ ಬಗ್ಗೆ ದೂರು ಸಲ್ಲಿಸಬಹುದಾಗಿದೆ ಎಂದು ಲೋಕಾಯುಕ್ತ ಜಿಲ್ಲಾ ಪೊಲೀಸ್ ಉಪಾಧೀಕ್ಷಕ ವಿಜಯ ಬಿರಾದಾರ ತಿಳಿಸಿದ್ದಾರೆ.

*******

ದಕ್ಷಿಣ ಕನ್ನಡ ಜಿಲ್ಲಾ ಬಾಲಕ ಮತ್ತು ಬಾಲಕಿಯರ ಕ್ರೀಡಾ ವಸತಿ ಗೃಹಕ್ಕೆ ದಿಢೀರ್ ದಾಳಿ ನಡೆಸಿರುವ ಮಂಗಳೂರು ಲೋಕಾಯುಕ್ತ ಪೊಲೀಸರು, ಅಲ್ಲಿನ ಹಲವು ಲೋಪದೋ ಾಗಳನ್ನು ಪತ್ತೆಹಚ್ಚಿದ್ದಾರೆ. ವಸತಿ ಗೃಹದ ಅಡುಗೆ ಕೋಣೆಯಲ್ಲಿ ಶುಚಿತ್ವ ಇಲ್ಲದಿರುವುದು. ದವಸ ಧಾನ್ಯಗಳ ಕೊರತೆ, ಅಡುಗೆಗೆ ಕಳಪೆ ಗುಣಮಟ್ಟದ ಎಣ್ಣೆ ಬಳಕೆ ಮತ್ತು ಅಕ್ಕಿಯಲ್ಲಿ ಹುಳಗಳು ಇರುವುದು ಕಂಡುಬಂದಿದೆ. ಸರಕಾರದಿಂದ ಬರುವ ಅನುದಾನ ದುರುಪಯೋಗವಾಗುವುದು ಪರಿಶೀಲನೆ ವೇಳೆ ಕಂಡುಬಂದಿದ್ದು, ಈ ಬಗ್ಗೆ ಸಮಗ್ರ ವರದಿಯನ್ನು ಕರ್ನಾಟಕ ಲೋಕಾಯುಕ್ತಕ್ಕೆ, ಸಲ್ಲಿಸಲಾಗುವುದು ಎಂದು ಕುಮಾರಚಂದ್ರ ತಿಳಿಸಿದ್ದಾರೆ.

*******

<u>ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು</u>

ಧಾರವಾಡ ಜಿಲ್ಲೆಯಲ್ಲಿ ಮಳೆಯಿಂದ ಹಾನಿಗೊಳಗಾದ ಪ್ರದೇಶಗಳಿಗೆ ಜಿಲ್ಲಾ ಉಸ್ತುವಾರಿ ಸಚಿವರ ಭೇಟಿ: ಹಾನಿ ಕುರಿತು ಪ್ರಾಥಮಿಕ ಸಮೀಕ್ಷಾ ವರದಿ ಸಲ್ಲಿಕೆ.

ಅಭಿವೃದ್ಧಿ ಯೋಜನೆಗಳ ಅನು ್ಠಾನದಲ್ಲಿ ನಿರ್ಲಕ್ಷ್ಯ ತೋರುವ ಎಪಿಎಂಸಿ ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ಕೃಷಿ ಮಾರುಕಟ್ಟೆ ಸಚಿವರ ಸೂಚನೆ.

ಪರಿಸರ ಸ್ನೇಹಿ ಗಣೇಶೋತ್ಸವ ಆಚರಣೆಗೆ ಅರಣ್ಯ ಮತ್ತು ಪರಿಸರ ಇಲಾಖೆ ಸಚಿವರ ಮನವಿ.

ಮುಂಬರುವ ಗಣೇಶ ಮತ್ತು ಈದ್ ಮಿಲಾದ ಆಚರಣೆ ಸಂದರ್ಭದಲ್ಲಿ ಶಾಂತಿ, ಸುವ್ಯವಸ್ಥೆ ಕಾಪಾಡಲು ಜಿಲ್ಲಾಡಳಿತಗಳಿಂದ ಅಗತ್ಯ ಕ್ರಮ.

****END****